**Akashvani : Bangalore**
**Regional Bulletin In Kannada**
**24.03.2026 / 18.40 hrs**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**24.03.2026 / 18.40 hrs**
******************

ಮುಖ್ಯಾಂಶಗಳು

೧. ಕೌನ್ಸೆಲಿಂಗ್ ಮೂಲಕ ಶಿಕ್ಷಕರ ವರ್ಗಾವಣೆ; ವಿಧಾನಸಭೆಯಲ್ಲಿ ಶಿಕ್ಷಣ ಸಚಿವ ಮಧುಬಂಗಾರಪ್ಪ ಸ್ಪಷ್ಟನೆ

೨. ಜಕ್ಕೂರು ವೈಮಾನಿಕ ತರಬೇತಿ ಕೇಂದ್ರವನ್ನು ಸ್ಥಳಾಂತರಿಸುವ ಪ್ರಸ್ತಾಪ ಸರ್ಕಾರದ ಮುಂದಿಲ್ಲ - ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್

೩. ಯುಎಇ ಯಿಂದ ಎಲ್‌ಪಿಜಿ ಹೊತ್ತ ಫೈನ್ ಗ್ಯಾಸ್ ಹಡಗು ಇದೇ ೨೭ ರಂದು ನವಮಂಗಳೂರು ಬಂದರಿಗೆ ಆಗಮನ

೪. ಆರ್‌ಸಿಬಿ ತಂಡಕ್ಕೆ ಕೆಎಂಎಫ್ ಪ್ರಾಯೋಜಕತ್ವ; ವಿರಾಟ್ ಕೊಹ್ಲಿ, ದೇವದತ್ ಪಡಿಕಲ್ ಅವರಿಂದ ಉತ್ಪನ್ನಗಳ ಪ್ರಚಾರ

***************

೨೦೨೬ನೇ ಸಾಲಿನ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು-ಶಿಕ್ಷಕರ ವರ್ಗಾವಣೆ ನಿಯಂತ್ರಣ ತಿದ್ದುಪಡಿ ವಿಧೇಯಕಕ್ಕೆ ವಿಧಾನಸಭೆಯಲ್ಲಿ ಇಂದು ಅನುಮೋದನೆ ದೊರೆತಿದೆ.

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧುಬಂಗಾರಪ್ಪ, ವಿಧೇಯಕವನ್ನು ಪರ್ಯಾಲೋಚನೆಗಾಗಿ ಮಂಡಿಸಿ ವಿವರಣೆ ನೀಡಿದ ಬಳಿಕ ಹಲವು ಸದಸ್ಯರು ಚರ್ಚೆಯಲ್ಲಿ ಭಾಗವಹಿಸಿ ಉಪಯುಕ್ತ ಸಲಹೆ ನೀಡಿದರು. ಬಳಿಕ, ಸಭಾಧ್ಯಕ್ಷ ಯು.ಟಿ.ಖಾದರ್ ವಿಧೇಯಕವನ್ನು ಮತಕ್ಕೆ ಹಾಕಿದಾಗ ಧ್ವನಿಮತದ ಅಂಗೀಕಾರ ದೊರೆಯಿತು.

ಇದಕ್ಕೂ ಮುನ್ನ ಸಚಿವ ಮಧು ಬಂಗಾರಪ್ಪ ಮಾತನಾಡಿ, ಕೌನ್ಸಿಲಿಂಗ್ ಮೂಲಕ ಶಿಕ್ಷಕರ ವರ್ಗಾವಣೆ ಮಾಡಲಾಗುವುದು ಎಂದು ಹೇಳಿದ್ದಾರೆ.

ಮೊದಲಿಗೆ ಕರ್ನಾಟಕ ಪಬ್ಲಿಕ್ ಶಾಲೆ, ಆದರ್ಶ ವಿದ್ಯಾಲಯ ಮತ್ತು ಪಿಎಂಶ್ರೀ ಶಾಲೆಗಳಿಗೆ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲಾಗುವುದು. ಈ ಶಾಲೆಗಳ ಹುದ್ದೆ ಭರ್ತಿ ಮಾಡಿದ ಬಳಿಕ ಉಳಿದ ಶಾಲೆಗಳ ಶಿಕ್ಷಕರ ಹುದ್ದೆ ಭರ್ತಿ ಮಾಡಲಾಗುವುದು ಎಂದು ತಿಳಿಸಿದ್ದಾರೆ.

ಶಾಲೆ ಅಥವಾ ಕಾಲೇಜುಗಳಲ್ಲಿನ ಸ್ಥಾನಿಕ ವೃಂದದಲ್ಲಿ ಸಲ್ಲಿಸಿರುವ ಶಿಕ್ಷಕರ ಕನಿಷ್ಠ ಸೇವಾವಧಿಯು ೧೨ ವರ್ಷಗಳಾಗಿರಬೇಕು. ಕಲ್ಯಾಣ ಕರ್ನಾಟಕ ಕೋಟಾದಡಿಯಲ್ಲಿ ನೇಮಕಗೊಂಡ ಶಿಕ್ಷಕರು ಕಲ್ಯಾಣ ಕರ್ನಾಟಕ ಭಾಗದಲ್ಲಿ ಕನಿಷ್ಠ ೧೦ ವರ್ಷ ಸೇವೆ ಸಲ್ಲಿಸಬೇಕು. ಆ ನಂತರ ವರ್ಗಾವಣೆಗೆ ಅವಕಾಶ ದೊರೆಯಲಿದೆ ಎಂದು ಸದನಕ್ಕೆ ಮಾಹಿತಿ ನೀಡಿದ್ದಾರೆ.

***************

ಬೆಂಗಳೂರಿನ ಜಕ್ಕೂರು ವೈಮಾನಿಕ ತರಬೇತಿ ಕೇಂದ್ರವನ್ನು ಸ್ಥಳಾಂತರಿಸುವ ಪ್ರಸ್ತಾಪ ಸರ್ಕಾರದ ಮುಂದಿಲ್ಲ ಎಂದು ಬೆಂಗಳೂರು ನಗರಾಭಿವೃದ್ಧಿ ಸಚಿವರೂ ಆಗಿರುವ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ವಿಧಾನಸಭೆಯಲ್ಲಿಂದು ತಿಳಿಸಿದ್ದಾರೆ.

ನಿಯಮ ೬೯ ರಡಿ ಸಾರ್ವಜನಿಕ ಮಹತ್ವದ ವಿಚಾರದ ಚರ್ಚೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಜಕ್ಕೂರು ವೈಮಾನಿಕ ತರಬೇತಿ ಕೇಂದ್ರವನ್ನು, ಸಾರ್ವಜನಿಕ-ಖಾಸಗಿ ಸಹಭಾಗಿತ್ವದಲ್ಲಿ ಮುಂದುವರೆಸುವ ಬಗ್ಗೆ ಪರಿಶೀಲಿಸಲಾಗುತ್ತಿದೆ. ಸ್ಥಳೀಯ ಶಾಸಕರ ಜತೆ ಚರ್ಚಿಸಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದ್ದಾರೆ.

ಇಂಧನ ಸಚಿವ ಕೆ.ಜೆ. ಜಾರ್ಜ್ ಮಾತನಾಡಿ, ಜಕ್ಕೂರು ವೈಮಾನಿಕ ತರಬೇತಿ ಕೇಂದ್ರದ ಬಳಿ ರಾಷ್ಟ್ರೀಯ ಹೆದ್ದಾರಿ ಮತ್ತು ಮೆಟ್ರೋ ರೈಲು ಮಾರ್ಗದ ಮೇಲ್ಸೇತುವೆಗಳು ಹಾದುಹೋಗಿವೆ. ಹೀಗಾಗಿ ವಿಮಾನ ಹಾರಾಟಕ್ಕೆ ಡಿಜಿಸಿಎ ಅನುಮತಿ ನೀಡಿಲ್ಲ. ಈ ಹಿನ್ನಲೆಯಲ್ಲಿ ತರಬೇತಿ ಕೇಂದ್ರವನ್ನು, ಶಿವಮೊಗ್ಗ, ಹಾಸನ, ಮೈಸೂರು ಸೇರಿದಂತೆ ಬೇರೆಡೆ ಸ್ಥಳಾಂತರಿಸಲು ಮುಖ್ಯಮಂತ್ರಿಗಳಿಗೆ ಮನವಿ ಮಾಡಲಾಗಿದೆ ಎಂದು ತಿಳಿಸಿದರು.

ಪ್ರತಿಪಕ್ಷ ನಾಯಕ ಆರ್.ಅಶೋಕ ಮಾತನಾಡಿ, ರಾಜ್ಯ ಸರ್ಕಾರ ಯಾವುದೇ ಕಾರಣಕ್ಕೂ ಜಕ್ಕೂರು ವೈಮಾನಿಕ ತರಬೇತಿ ಕೇಂದ್ರವನ್ನು ಸ್ಥಳಾಂತರ ಮಾಡಬಾರದು ಎಂದು ಸದನದಲ್ಲಿ ಒತ್ತಾಯಿಸಿದ್ದಾರೆ.

***************

೯೨ ಸಾವಿರದ ೬೦೦ ಮೆಟ್ರಿಕ್ ಟನ್ ಎಲ್‌ಪಿಜಿ ಹೊತ್ತ ಎರಡು ಹಡಗುಗಳು ಹಾರ್ಮುಜ್ ಜಲಸಂಧಿಯನ್ನು ಸುರಕ್ಷಿತವಾಗಿ ದಾಟಿ ಭಾರತಕ್ಕೆ ಆಗಮಿಸುತ್ತಿವೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ.

ಯುನೈಟೆಟ್ ಅರಬ್ ಎಮಿರೇಟ್ಸ್‌ನ ರುವೈಸ್‌ನಿಂದ ೪೫ ಸಾವಿರ ಮೆಟ್ರಿಕ್ ಎಲ್‌ಪಿಜಿ ಹೊತ್ತ ಫೈನ್‌ಗ್ಯಾಸ್ ಹಡಗು ಇದೇ ೧೭ ರಂದು ನವಮಂಗಳೂರು ಬಂದರಿಗೆ ಆಗಮಿಸಲಿದೆ ಎಂದು ಬಂದರುಗಳು, ಹಡಗು ಸಾಗಾಣೆ ಮತ್ತು ಜಲಮಾರ್ಗಗಳ ಸಚಿವಾಲಯದ ವಿಶೇಷ ಕಾರ್ಯದರ್ಶಿ ರಾಜೇಶ್ ಕುಮಾರ್ ಸಿನ್ಹಾ ಮಾಹಿತಿ ನೀಡಿದ್ದಾರೆ.

ಜಗ್‌ವಸಂತ್ ಹಡಗು ಇದೇ ೧೬ ರಂದು ಗುಜರಾತ್ ಕಾಂಡ್ಲಾ ಬಂದರಿಗೆ ಆಗಮಿಸಲಿದೆ.

***************

ಕನ್ನಡಿಗರ ಹೆಮ್ಮೆಯ ಬ್ರ್ಯಾಂಡ್ ಕೆ.ಎಂ.ಎಫ್ ೨೦೨೬ರ ಐಪಿಎಲ್ ಆವೃತ್ತಿಯಲ್ಲಿ ಆರ್‌ಸಿಬಿ ತಂಡಕ್ಕೆ ಪ್ರಾಯೋಕತ್ವ ನೀಡಿದೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಕೆ.ಎಂ.ಎಫ್ ವ್ಯವಸ್ಥಾಪಕ ನಿರ್ದೇಶಕ ಶಿವಸ್ವಾಮಿ, ಒಟ್ಟು ನಾಲ್ಕು ಕೋಟಿ ರೂಪಾಯಿ ವೆಚ್ಚದಲ್ಲಿ ಕೆ.ಎಂ.ಎಫ್ ಒಂದು ವರ್ಷದ ಟೆಂಡರ್ ಪಡೆದಿದೆ ಎಂದು ತಿಳಿಸಿದ್ದಾರೆ.

ಅತಿ ಹೆಚ್ಚು ಅಭಿಮಾನಿಗಳನ್ನು ಹೊಂದಿರುವ ಆರ್‌ಸಿಬಿ ತಂಡದ ಮೂಲಕ ನಂದಿನಿ ಉತ್ಪನ್ನಗಳು ದೇಶಕ್ಕೆ ಪರಿಚಯವಾಗಲಿವೆ ಎಂದು ಹೇಳಿದ್ದಾರೆ.

ವಿರಾಟ್ ಕೊಹ್ಲಿ, ರಜತ್ ಪಾಟೀದಾರ್, ದೇವದತ್ ಪಡಿಕಲ್ ಕೆಎಂಎಫ್ ಉತ್ಪನ್ನದ ಪ್ರಚಾರ ರಾಯಭಾರಿಯಾಗಿದ್ದಾರೆ.

***************

ಬೆಳಗಾವಿ ಜಿಲ್ಲೆಯಲ್ಲಿ ಗೃಹಬಳಕೆ ಸಿಲಿಂಡರ್ ಹಾಗೂ ಇಂಧನದ ಕೊರತೆಯಿಲ್ಲ. ಸಾರ್ವಜನಿಕರು ವದಂತಿಗಳಿಗೆ ಕಿವಿಗೊಟ್ಟು ಆತಂಕಕ್ಕೆ ಒಳಗಾಗಬಾರದು ಎಂದು ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಮನವಿ ಮಾಡಿಕೊಂಡಿದ್ದಾರೆ.

ಜಿಲ್ಲಾಧಿಕಾರಿ ಕಚೇರಿಯಲ್ಲಿ ಇಂದು ಮಾತನಾಡಿದ ಅವರು, ಬಂಕ್ ಗಳಲ್ಲಿ ಸ್ಟಾಕ್ ಖಾಲಿಯಾದರೆ ಕೇವಲ ಐದು ಗಂಟೆಗಳಲ್ಲಿ ಸ್ಟಾಕ್ ಲಭ್ಯವಾಗಲಿದೆ.

ಇಂಧನ ಕೊರತೆ ಎಲ್ಲಿಯೂ ಕಂಡುಬಂದಿರುವುದಿಲ್ಲ ಎಂದು ಜಿಲ್ಲಾಧಿಕಾರಿ ಸ್ಪಷ್ಟಪಡಿಸಿದರು. ಸಾಮಾಜಿಕ ಜಾಲತಾಣಗಳಲ್ಲಿ ತಪ್ಪು ಮಾಹಿತಿಯನ್ನು ಹರಡಿದರೆ ಅಂತಹವರ ವಿರುದ್ಧ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

***************

ಬಾಗಲಕೋಟೆ ವಿಧಾನಸಭಾ ಉಪ ಚುನಾವಣೆ ಹಿನ್ನೆಲೆಯಲ್ಲಿ ನೇಮಕಗೊಂಡ ಸೂಕ್ಷ್ಮ ಮತಗಟ್ಟೆ ವೀಕ್ಷಕರು ಜಿಲ್ಲಾ ಪಂಚಾಯತ್ ನೂತನ ಸಭಾಭವನದಲ್ಲಿ ಇಂದು ತರಬೇತಿ ಕಾರ್ಯಾಗಾರದಲ್ಲಿ ಪಾಲ್ಗೊಂಡರು.

ತರಬೇತಿ ಕಾರ್ಯಾಗಾರ ಉದ್ದೇಶಿಸಿ ಮಾತನಾಡಿದ ಸಾಮಾನ್ಯ ವೀಕ್ಷಕರಾದ ಪಾರುಲ್ ಪಟವಾರಿ, ಸೂಕ್ಷ್ಮ ಮತಗಟ್ಟೆ ವೀಕ್ಷಕರು ಕರ್ತವ್ಯಗಳು ಹಾಗೂ ಜವಾಬ್ದಾರಿಗಳ ಕುರಿತು ಸಮಗ್ರ ಮಾಹಿತಿ ನೀಡಿದರು. ಮತಗಟ್ಟೆಗಳಲ್ಲಿ ಮತದಾನ ಪ್ರಕ್ರಿಯೆಯನ್ನು ಸೂಕ್ಷ್ಮವಾಗಿ ಗಮನಿಸಬೇಕು. ಇವಿಎಂ ಹಾಗೂ ವಿವಿಪ್ಯಾಟ್ ಉಪಕರಣಗಳ ಕಾರ್ಯಾಚರಣೆ, ಮಾದರಿ ಮತದಾನ, ಮತದಾನದ ಆರಂಭ ಮತ್ತು ಅಂತ್ಯದ ಕ್ರಮಗಳ ಬಗ್ಗೆ ಮಾಹಿತಿ ನೀಡಿದರು.

***************

ಇಂದು ವಿಶ್ವ ಕ್ಷಯರೋಗ ದಿನ. 'ಹೌದು! ನಾವು ಕ್ಷಯರೋಗವನ್ನು ಕೊನೆಗಾಣಿಸಬಲ್ಲೆವು' ಎಂಬುದು ಈ ವರ್ಷದ ಘೋಷವಾಕ್ಯವಾಗಿದೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಕ್ಷಯ ರೋಗ ನಿರ್ಮೂಲನ ಘಟಕದ ಸಹಯೋಗದಲ್ಲಿ ವಿಶ್ವ ಕ್ಷಯ ರೋಗ ದಿನಾಚರಣೆ ಆಚರಿಸಲಾಯಿತು.

ಕ್ಷಯರೋಗ ಸೋಂಕಿತರು ಸಕಾಲದಲ್ಲಿ ವೈದ್ಯಕೀಯ ಚಿಕಿತ್ಸೆ ಪಡೆಯುವ ಮೂಲಕ ಕ್ಷಯ ರೋಗವನ್ನು ಗುಣಪಡಿಸಬಹುದು ಎಂದು ಮಂಡ್ಯ ಜಿಲ್ಲಾಧಿಕಾರಿ ಡಾ. ಕುಮಾರ ತಿಳಿಸಿದ್ದಾರೆ.

ವಿಶ್ವ ಕ್ಷಯರೋಗ ದಿನ "೧೦೦ ದಿನಗಳ ಟಿ.ಬಿ ಮುಕ್ತ ಭಾರತ ಅಭಿಯಾನ ಜಾಥಾ " ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಮಾತನಾಡಿದ ಅವರು, ಕ್ಷಯ ರೋಗಕ್ಕೆ ತುತ್ತಾಗಿರುವಂತಹ ವ್ಯಕ್ತಿಗಳನ್ನು ಪ್ರೀತಿ ವಿಶ್ವಾಸದಿಂದ ಹಾಗೂ ವಾತ್ಸಲ್ಯ ದಿಂದ ನೋಡಿಕೊಳ್ಳಬೇಕು ಎಂದು ಅವರು ಕರೆ ನೀಡಿದ್ದಾರೆ.

ಕ್ಷಯರೋಗವನ್ನು ಶಾಶ್ವತವಾಗಿ ನಿರ್ಮೂಲನೆ ಮಾಡುವ ಸಂಕಲ್ಪದೊಂದಿಗೆ ಉಡುಪಿ ಜಿಲ್ಲೆಯನ್ನು ಕ್ಷಯ ಮುಕ್ತ ಜಿಲ್ಲೆಯನ್ನಾಗಿಸಲು ಸಹಕರಿಸಬೇಕು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮನು ಪಟೇಲ್ ಬಿ.ವೈ ಕರೆ ನೀಡಿದ್ದಾರೆ.

***************

ವಿಜಯಪುರದಲ್ಲಿ ಇತ್ತೀಚೆಗೆ ಬೀಸಿದ ಬಿರುಗಾಳಿ ಹಾಗೂ ಆಲಿಕಲ್ಲು ಮಳೆಯಿಂದಾಗಿ ಕೃಷಿ, ತೋಟಗಾರಿಕಾ ಬೆಳೆ ಹಾನಿಗೆ ಸಂಬಂಧಿಸಿದಂತೆ ಜಂಟಿ ಸಮೀಕ್ಷೆ ಕೈಗೊಂಡು ಮೂರು ದಿನದೊಳಗೆ ವರದಿ ಸಲ್ಲಿಸಬೇಕು ಎಂದು ಜಿಲ್ಲಾಧಿಕಾರಿ ಡಾ.ಆನಂದ ಕೆ. ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಕೃಷಿ, ತೋಟಗಾರಿಕೆ ಹಾಗೂ ಕಂದಾಯ ಇಲಾಖೆ ಅಧಿಕಾರಿಗಳು ಹಾಗೂ ಬೆಳೆ ವಿಮಾ ಕಂಪನಿಯ ಅಧಿಕಾರಿಗಳೊಂದಿಗೆ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಕಂದಾಯ, ಕೃಷಿ ಹಾಗೂ ತೋಟಗಾರಿಕೆ ಇಲಾಖೆ ಅಧಿಕಾರಿಗಳ ತಂಡ ರಚಿಸಿ ಹಾನಿಗೊಳಗಾದ ಕ್ಷೇತ್ರಗಳಿಗೆ ಭೇಟಿ ನೀಡಬೇಕು. ನಿಖರವಾದ ಸಮೀಕ್ಷೆ ಕೈಗೊಂಡು ೩ ದಿನಗೊಳಗಾಗಿ ಜಂಟಿ ಸಮೀಕ್ಷೆ ನಡೆಸಿ ವರದಿ ನೀಡಬೇಕು ಎಂದು ನಿರ್ದೇಶನ ನೀಡಿದ್ದಾರೆ.

***************

ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲೂಕಿನ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ಮದ್ದೂರು ಅರಣ್ಯ ವಲಯದಲ್ಲಿ ಹೆಣ್ಣು ಹುಲಿಯ ಕಳೇಬರ ಪತ್ತೆಯಾಗಿದೆ.

ಈ ಬಗ್ಗೆ ಮಾಹಿತಿ ನೀಡಿರುವ ಮದ್ದೂರು ವಲಯ ಅರಣ್ಯಾಧಿಕಾರಿ, ಈ ಹುಲಿ ವಯೋಸಹಜದಿಂದ ಸ್ವಾಭಾವಿಕವಾಗಿ ಮೃತಪಟ್ಟಿರುವುದು ಮೇಲ್ನೋಟಕ್ಕೆ ಕಂಡುಬಂದಿದೆ. ಹುಲಿಯ ಹಲ್ಲುಗಳು ಕೂಡ ಸವೆದಿರುವುದರಿಂದ ವಯಸ್ಸಾಗಿರುವ ಹುಲಿ ಎಂದು ತಿಳಿದುಬಂದಿದೆ.

ನಾಳೆ ಬಂಡೀಪುರ ಹುಲಿ ಯೋಜನೆ ನಿರ್ದೇಶಕರ ಸಮ್ಮುಖದಲ್ಲಿ ಎನ್‌ಟಿಸಿಎ ಮಾರ್ಗಸೂಚಿಯಂತೆ ಹುಲಿಯ ಮರಣೋತ್ತರ ಪರೀಕ್ಷೆ ನಡೆಸಲಾಗುತ್ತಿದೆ ಎಂದು ತಿಳಿಸಿದ್ದಾರೆ.

***************

ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೆಯ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಯ ಆರು ಖರೀದಿ ಕೇಂದ್ರಗಳಲ್ಲಿ ರಾಗಿ ಖರೀದಿ ಪ್ರಕ್ರಿಯೆ ನಡೆಯುತ್ತಿದೆ.

ಜಿಲ್ಲೆಯಲ್ಲಿ ಈವರೆಗೆ ೫ ಸಾವಿರದ ೫೭೬ ರೈತರಿಂದ ಒಟ್ಟು ೧ ಲಕ್ಷದ ೧೭ ಸಾವಿರದ ೬೫೧ ಕ್ವಿಂಟಲ್ ರಾಗಿ ಖರೀದಿಸಲಾಗಿದೆ ಎಂದು ಆಹಾರ ಇಲಾಖೆಯ ಜಿಲ್ಲಾ ಜಂಟಿ ನಿರ್ದೇಶಕ ನಾಗರಾಜ ಕೆಳಗಿನಮನಿ ತಿಳಿಸಿದ್ದಾರೆ. ಶೇಕಡಾ ೭೪.೬೨ ರಷ್ಟು ಗುರಿ ಸಾಧನೆಯಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

***************

ಸಂಕ್ಷಿಪ್ತ ಸುದ್ದಿಗಳು-೧

೧. ಯಾದಗಿರಿ ಜಿಲ್ಲೆಯಲ್ಲಿ ಗೃಹ ಬಳಕೆ ಎಲ್‌ಪಿಜಿ ಸಿಲಿಂಡರ್‌ಗಳ ಯಾವುದೇ ಕೊರತೆ ಇಲ್ಲ ಎಂದು ಜಿಲ್ಲಾಧಿಕಾರಿ ಹರ್ಷಲ್ ಭೋಯರ್ ಸ್ಪಷ್ಟಪಡಿಸಿದ್ದಾರೆ. ಕೇಂದ್ರ ಸರ್ಕಾರದ ಆದೇಶದಂತೆ ಶೇಕಡಾ ೩೦ರಷ್ಟು ವಾಣಿಜ್ಯ ಬಳಕೆಯ ಸಿಲಿಂಡರ್‌ಗಳ ಸರಬರಾಜಿಗೂ ಅವಕಾಶ ಕಲ್ಪಿಸಲಾಗಿದ್ದು, ಅದರಂತೆ ವಿತರಣೆ ನಡೆಯುತ್ತಿದೆ ಎಂದು ಮಾಹಿತಿ ನೀಡಿದ್ದಾರೆ.

೧. ದಕ್ಷಿಣ ಕನ್ನಡ ಜಿಲ್ಲಾ ಸಾಹಿತ್ಯ ಪರಿಷತ್ ವತಿಯಿಂದ ಇದೇ ೧೬ರಿಂದ ೧೮ರವರೆಗೆ ಬಂಟ್ವಾಳ ತಾಲೂಕಿನ ಬಿ.ಸಿ.ರೋಡ್‌ನ ಸ್ಪರ್ಶ ಕಲಾ ಮಂದಿರದಲ್ಲಿ ೧೮ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನ ಯೋಜಿಸಲಾಗಿದೆ ಎಂದು ದಕ್ಷಿಣ ಕನ್ನಡ ಜಿಲ್ಲಾ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ.ಎಂ.ಪಿ.ಶ್ರೀನಾಥ್ ತಿಳಿಸಿದ್ದಾರೆ.

೨. ಪರಿಶಿಷ್ಟ ಪಂಗಡದ ರಾಷ್ಟ್ರೀಯ ಆಯೋಗದ ಸದಸ್ಯೆ ಡಾಕ್ಟರ್ ಆಶಾ ಲಕ್ರಾ ಅವರು ಇಂದು ಮೈಸೂರಿನ ಹೆಚ್.ಡಿ.ಕೋಟೆಯ ಹ್ಯಾಂಡ್ ಪೋಸ್ಟ್ ಬಳಿ ಜೇನು ಕುರುಬ ಮಹಿಳೆಯರು ನಡೆಸುತ್ತಿರುವ ಸಿರಿಧಾನ್ಯ ಸ್ಟೋರ್ ಗೆ ಭೇಟಿ ನೀಡಿ ಮಹಿಳೆಯರೊಂದಿಗೆ ಸಂವಾದ ನಡೆಸಿದರು.

೪. ಚಿಕ್ಕಬಳ್ಳಾಪುರ ಜಿಲ್ಲಾಡಳಿತ ಭವನದ ಆವರಣದಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಹಾಗೂ ಸಂವಿಧಾನ ಶಿಲ್ಪಿ ಭಾರತ ರತ್ನ ಡಾ.ಆರ್.ಅಂಬೇಡ್ಕರ್ ಅವರ ಪುತ್ಥಳಿಗಳನ್ನು ಅತಿ ಶೀಘ್ರದಲ್ಲೇ ನಿರ್ಮಿಸಲಾಗುವುದು ಎಂದು ಜಿಲ್ಲಾಧಿಕಾರಿ ಜಿ.ಪ್ರಭು ತಿಳಿಸಿದ್ದಾರೆ.

೫. ಯುವಜನರು ಜಾಗತಿಕ ಸ್ಪರ್ಧೆಯ ಉದ್ಯೋಗಾವಕಾಶಗಳಿಗೆ ಅಗತ್ಯವಿರುವ ಎಲ್ಲಾ ಕೌಶಲ್ಯಗಳೊಂದಿಗೆ ಸನ್ನದ್ಧರಾಗಬೇಕು ಎಂದು ಚಿಕ್ಕಬಳ್ಳಾಪುರ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ವೈ.ನವೀನ್ ಭಟ್ ಸಲಹೆ ನೀಡಿದ್ದಾರೆ.

೬. ಮೈಸೂರಿನಲ್ಲಿ ರಸ್ತೆ ಅಪಘಾತಗಳನ್ನು ತಡೆಗಟ್ಟಲು ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಜಿ ಲಕ್ಷ್ಮೀಕಾಂತ ರೆಡ್ಡಿ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

೭. ರಾಜ್ಯದಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರೆ ಹಿಂದುಳಿದ ವರ್ಗಗಳ ಮೀಸಲಾತಿಯನ್ನು ಶೇಕಡಾ ೫೬ಕ್ಕೆ ಹೆಚ್ಚಿಸಿ, ಅದಕ್ಕೆ ಅನುಗುಣವಾಗಿ ೫೬ ಸಾವಿರ ಸರ್ಕಾರಿ ಹುದ್ದೆಗಳ ನೇಮಕಾತಿ ಮಾಡಬೇಕು ಎಂದು ಮಾಜಿ ಸಂಸದ ವಿ.ಎಸ್. ಉಗ್ರಪ್ಪ ಯಾದಗಿರಿಯಲ್ಲಿ ಒತ್ತಾಯಿಸಿದ್ದಾರೆ.

*******ಮುಕ್ತಾಯ********